**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ. 3898/2024**

| | | |
|---|---|---|
| **ಹೆಸರು** | :- | **ಶ್ರೀನಾಥ ಆರ್** |
| **ತಂದೆಯ ಹೆಸರು** | :- | **ಇ ಎನ್ ರಾಜೇಂದ್ರಪ್ಪ** |
| **ವಯಸ್ಸು** | :- | **47 ವರ್ಷ** |
| **ಉದ್ಯೋಗ** | :- | **ಅಬಕಾರಿ ನಿರೀಕ್ಷಕರು** |
| **ಸ್ಥಳ** | :- | **ಶಿವಮೊಗ್ಗ** |

**ದಿನಾಂಕಃ 09.06.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನಾನು ಜೂನ್ 2021 ಸೆಪ್ಟಂಬರ್ 2024 ರವರೆಗೆ ಸೊರಬ ವಲಯ ಅಬಕಾರಿ ಕಛೇರಿಯಲ್ಲಿ ಅಬಕಾರಿ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 09.05.2024 ರಂದು ಚಾಸಾ-1 ರವರಿಂದ ಸದರಿ ಪ್ರಕರಣದ ಕಡತ ಮತ್ತು ಮುದ್ದೆ ಮಾಲನ್ನು ಪಡೆದುಕೊಂಡು ತನಿಖೆ ಮುಂದುವರೆಸಿರುತ್ತೇನೆ. ದಿಃ 27.05.2024 ರಂದು ಸದರಿ ಪ್ರಕರಣದಲ್ಲಿ ಅಮಾನತ್ತುಪಡಿಸಿಕೊಂಡ ಮುದ್ದೆ ಮಾಲನ್ನು ಚಾಸಾ-5 ರವರ ಮುಖಾಂತರ ಸಹಾಯಕ ರಾಸಾಯನಿಕ ವಿಶ್ಲೇಷಕರು ಚಿತ್ರದುರ್ಗ ರವರಿಗೆ ನಿವೇದನೆಯೊಂದಿಗೆ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಯು ನಿವೇದನೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-14 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-14 ಎ ಎಂದು

ಗುರುತಿಸಲಾಯಿತು. ದಿಃ 28.05.2024 ರಂದು ಚಾಸಾ-5 ರವರು ರಾಸಾಯನಿಕ ವಿಶ್ಲೇಷಣಾ ವರದಿ ಮತ್ತು ಮುದ್ದೆ ಮಾಲನ್ನು ನನ್ನ ಮುಂದೆ ಹಾಜರುಪಡಿಸಿದ್ದು, ಅದನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ವಿಶ್ಲೇಷಣಾ ವರದಿಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ಆರೋಪಿ ಪರ ವಕೀಲರ ಒಪ್ಪಿಗೆಯ ಮೇರೆಗೆ ನಿಪಿ-11 ಎಂದು ಗುರುತಿಸಲ್ಪಟ್ಟಿರುತ್ತದೆ. ದಿಃ 29.05.2024 ರಂದು ಪಿ.ಡಿ.ಓ. ಹೊಸಬಾಳೆ ರವರಿಗೆ ಕೃತ್ಯ ನಡೆದ ಸ್ಥಳದ ಮಾಲೀಕತ್ವದ ದೃಢೀಕರಣ ದಾಖಲೆಗಳನ್ನು ನೀಡುವಂತೆ ನಿವೇದನೆಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ನಿವೇದನೆಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-12 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ-12 ಎ ಎಂದು ಗುರುತಿಸಲಾಯಿತು. ದಿಃ 30.05.2024 ರಂದು ಚಾಸಾ-7 ರವರು ಸದರಿ ಕೃತ್ಯ ನಡೆದ ಸ್ಥಳವು ಯಾರ ಹೆಸರಿಗೆ ದಾಖಲಾಗಿರುತ್ತದೆ ಎಂದು ಯಾವುದೇ ದಾಖಲೆಗಳು ಲಭ್ಯವಿರುವುದಿಲ್ಲ ಎಂದು ವರದಿ ನೀಡಿರುತ್ತಾರೆ. ಸಾಕ್ಷಿಯು ವರದಿಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-13 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ-13 ಬಿ ಎಂದು ಗುರುತಿಸಲಾಯಿತು. ದಿಃ 30.05.2024 ರಂದು ಅಬಕಾರಿ ನಿರೀಕ್ಷಕರು ಕೆ.ಎಸ್.ಬಿ.ಸಿ.ಎಲ್ ಡಿಪೋ ಸಾಗರವರಿಗೆ ಸದರಿ ಪ್ರಕರಣದಲ್ಲಿ ಜಪ್ತಿ ಪಡಿಸಿಕೊಂಡ ಮುದ್ದೆ ಮಾಲುಗಳು ಯಾರ ಸನ್ನದ್ಧಿಗೆ ಸೇರಿವೆ ಎಂದು ವರದಿ ನೀಡುವಂತೆ ನಿವೇದನೆಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ನಿವೇದನೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-15 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-15 ಎ ಎಂದು

ಗುರುತಿಸಲಾಯಿತು. ದಿಃ 11.06.2024 ರಂದು ಸದರಿ ಪ್ರಕರಣದಲ್ಲಿ ಅಮಾನತ್ತುಪಡಿಸಿಕೊಂಡ ಮುದ್ದೆ ಮಾಲುಗಳು ನಿತ್ಯಾನಂದ ಎನ್ನುವವರ ಅಬಕಾರಿ ಸನ್ನದ್ಧಿಗೆ ವಿತರಣೆ ಮಾಡಲಾಗಿರುತ್ತದೆ ಎಂದು ವರದಿಯನ್ನು ನೀಡಿರುತ್ತಾರೆ. ಸಾಕ್ಷಿಯು ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–16 ಮತ್ತು ಸಾಕ್ಷಿಯ ಸಹಿಯನ್ನು ನಿಪಿ–16 ಎ ಎಂದು ಗುರುತಿಸಲಾಯಿತು. ಸಾಕ್ಷಿಯು Transport permit label ನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–17 ಎಂದು ಗುರುತಿಸಲಾಯಿತು. ಸದರಿ ಪ್ರಕರಣದಲ್ಲಿ ಪ್ರತ್ಯಕ್ಷದರ್ಶಿಗಳಾದ ಚಾಸಾ–2 ಮತ್ತು 5 ರವರ ಹೇಳಿಕೆಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಪ್ರಕಣದಲ್ಲಿ ತನಿಖೆ ಪೂರ್ಣಗೊಂಡು ಆರೋಪಿಯ ವಿರುದ್ಧ ಸಾಕಷ್ಟು ಸಾಕ್ಷ್ಯಾಧಾರಗಳು ಲಭ್ಯವಾಗಿರುವುದರಿಂದ ಆರೋಪಿಯ ವಿರುದ್ಧ ಅಂತಿಮ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**<u>ಪಾಟಿ ಸವಾಲುಃ ಆರೋಪಿ ಪರ ಶ್ರೀ.ಡಿ.ವಿ.ಕೆ. ವಕೀಲರಿಂದಃ</u>**

ಚಾಸಾ–1 ರವರ ಸುಳ್ಳು ದೂರಿನನ್ವಯ ಸರಿಯಾಗಿ ತನಿಖೆ ಮಾಡದೇ ಆರೋಪಿಯ ವಿರುದ್ಧ ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೀರಿ ಅಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಅಂದರೆ ಸರಿಯಲ್ಲ.

CC No.3898/2024
CW-8   PW-6

**ಮರುವಿಚಾರಣೆಃ ಇಲ್ಲ.**

(**ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು**).

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**